ಅ) ಎಲ್ಲಾ ಕಡುಬಡವರಿಗೆ ಯಾವಾಗ ಈ ಹಸಿರು ಕಾರ್ಡುಗಳನ್ನು ಹಂಚುವ ಕೆಲಸ ಪೂರ್ಣಗೊಳ್ಳುವುದು;

ಇ) ಅರ್ಹ ಫಲಾನುಭವಿಗಳನ್ನು ಗುರುತಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು):

ಅ) ಬೆಂಗಳೂರು ನಗರದಲ್ಲಿ ಹಾಲಿ 1,40,041 ಹಸಿರು ಪಡಿತರ ಚೀಟಿಗಳಿರುತ್ತವೆ. ಅದಕ್ಕೆ ಬದಲಾಗಿ ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿರುವ ಘೋಷಿತ ಮತ್ತು ಅಘೋಷಿತ ಕೊಳಚೆ ಪ್ರದೇಶಗಳಲ್ಲಿ ವಾಸಿಸುತ್ತಿರುವ ಕಡುಬಡ ಕುಟುಂಬಗಳನ್ನು ಸಮೀಕ್ಷೆ ಮೂಲಕ ಗುರುತಿಸಿ ಹೆಚ್ಚು ಸಹಾಯ ಧನಯುಕ್ತ ಗಣಕೀಕೃತ ಹಳದಿ ಪಡಿತರ ಚೀಟಿ ವಿತರಣೆ ಮಾಡಲು ಕ್ರಮಕೈಗೊಳ್ಳಲಾಗಿದೆ.

ಆ) ಮನೆ ಮನೆ ಸಮೀಕ್ಷಾ ಕಾರ್ಯವನ್ನು ಪ್ರಾರಂಭಿಸಿದ್ದು, ದಿನಾಂಕ: 1-4-2002 ರಿಂದ ಆಯ್ದ ಗಣಕೀಕರಣ ಕೇಂದ್ರಗಳ ಮೂಲಕ ಗಣಕೀಕೃತ ಹಳದಿ ಪಡಿತರ ಚೀಟಿಗಳನ್ನು ವಿತರಿಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮವು ಮೂರು ತಿಂಗಳೊಳಗೆ ಮುಗಿಯುವ ನಿರೀಕ್ಷೆ ಇರುತ್ತದೆ.

ಇ) ಅರ್ಹ ಫಲಾನುಭವಿಗಳನ್ನು ಗುರುತಿಸಲು ಇಲಾಖೆಯ ಆಹಾರ ನಿರೀಕ್ಷಕರ ತಂಡಗಳನ್ನು ರಚಿಸಿ ಘೋಷಿತ:: ಅಘೋಷಿತ ಕೊಳಚೆ ಪ್ರದೇಶಗಳಲ್ಲಿರುವ ಎಲ್ಲಾ ಮನೆಗಳಿಗೂ ಭೇಟಿ ನೀಡಿ ಸಮೀಕ್ಷೆ ನಡೆಸಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಪಟ್ಟಿ ತಯಾರಿಸಿ, ಅರ್ಹರಿಗೆ ಗಣಕೀಕೃತ ಹಳದಿ ಪಡಿತರ ಚೀಟಿಯನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಸಮೀಕ್ಷೆ ನಡೆಸುವಾಗ ಕೊಳಚೆ ಪ್ರದೇಶ ನಿರ್ಮೂಲನಾ ಮಂಡಳಿಯ ಅಧಿಕಾರಿಗಳ :: ಸಿಬ್ಬಂದಿಗಳ ನೆರವನ್ನೂ ಸಹ ಪಡೆಯಲಾಗುವುದು.

ಬೆಂಗಳೂರು ನಗರದಲ್ಲಿ ಪಡಿತರ ಚೀಟಿ ಇಲ್ಲದವರಿಗೆ ಹೊಸ ಪಡಿತರ ಚೀಟಿ ವಿತರಣೆ

1455 (1852) - ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಇಲ್ಲಿಯವರೆಗೆ ಎಷ್ಟು ಗಣಕೀಕೃತ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ;

ಆ) ಬೆಂಗಳೂರು ನಗರದಲ್ಲಿ ಪಡಿತರ ಚೀಟಿ ಹೊಂದಿಲ್ಲದವರಿಗೆ ಹೊಸದಾಗಿ ಪಡಿತರ ಚೀಟಿ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು):

ಅ) ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಇದುವರೆಗೆ (ದಿ: 16-3-2002 ರವರೆಗೆ) 6.80 ಲಕ್ಷ ಗಣಕೀಕೃತ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.